# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಹೆಚ್.ಸಿ ಚಿಕ್ಕಬೋರೇಗೌಡ, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸಿಂಧುವಳ್ಳಿ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆಯ ಅಂತಿಮ ಆದೇಶ ಹೊರಡಿಸುವ ಬಗ್ಗೆ.

ಓದಲಾಗಿದೆ:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಮೈಸೂರು ರವರ ಪತ್ರ ಸಂಖ್ಯೆ:ಸಿ.ಸಿ.ಎ/21/2012-13 ದಿನಾಂಕ:03.01.2017.
2. ಶ್ರೀ ಎನ್.ನಾರಾಯಣ, ವಿಚಾರಣಾಧಿಕಾರು ಹಾಗೂ ನಿವೃತ್ತ ಪ್ರಧಾನ ಜಿಲ್ಲಾ ನ್ಯಾಯಾಧೀಶರು ರವರ ವಿಚಾರಣಾ ವರದಿ ಸಂಖ್ಯೆ: ಇವಿ/24/2014, ದಿನಾಂಕ:22.07.2014
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಮೈಸೂರು ರವರ ತಿಳುವಳಿಕೆ ಪತ್ರ ದಿನಾಂಕ:14.03.2016.
4. ಉಪ ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ ರವರ ಪತ್ರ ಸಂಖ್ಯೆ:ಪಿಎಸ್‌ಸಿ:28:ಸಿಎನ್‌ಎಸ್:18 ದಿನಾಂಕ:29.09.2018.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಶ್ರೀ ಹೆಚ್.ಸಿ ಚಿಕ್ಕಬೋರೇಗೌಡ, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸಿಂಧುವಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ ದಿನಾಂಕ:22.02.2013 ರಂದು ವಿಶೇಶ ಸಭೆಯನ್ನು ನಡೆಸಿ ಶ್ರೀ ಕೃಪಾಕರ ಬಿನ್ ಶಾಮಣ್ಣ ಎಂಬುವವರಿಗೆ ಸರ್ವೆ ನಂ:394ರಲ್ಲಿ 2 ಎಕರೆ ಮತ್ತು ಸರ್ವೆ ನಂ:395ರಲ್ಲಿ 2 ಎಕರೆ ಜಮೀನಿಗೆ ವಸತಿ ಉದ್ದೇಶಕ್ಕೆ ನಿರಾಕ್ಷೇಪಣಾ ಪತ್ರವನ್ನು ನೀಡಲು ಅನುಮೋದನೆ ಪಡೆದಿರುವುದಾಗಿ ನಡವಳಿಯನ್ನು ಮಾಡಿರುವ ಬಗ್ಗೆ ದಾಖಲೆಗಳನ್ನು ನೀಡಿದ್ದು, ಮೂಲ ನಡವಳಿಯಲ್ಲಿ ಸದರಿ ವಿಷಯವನ್ನು ಚರ್ಚಿಸಿರುವ ಬಗ್ಗೆ ಯಾವುದೇ ವಿಷಯವು ದಾಖಲಾಗಿರುವುದಿಲ್ಲ. ಗ್ರಾಮ ಪಂಚಾಯತ್‌ನಲ್ಲಿ ಚರ್ಚೆಯಾಗದೇ ಇರುವ ವಿಷಯವಾಗಿ ನಡವಳಿ ಆಗಿರುವುದಾಗಿ ನಿರಾಕ್ಷೇಪಣಾ ಪತ್ರವನ್ನು ನೀಡಿ ಕರ್ತವ್ಯಲೋಪವೆಸಗಿರುವ ನಿವೃತ್ತ ಆಪಾದಿತ ನೌಕರರಿಗೆ ದಂಡನಾದೇಶವನ್ನು ಹೊರಡಿಸಲು ಕೆ.ಸಿ.ಎಸ್.ಆರ್ ನಿಯಮ 214 ರಂತೆ ಸರ್ಕಾರವು ಸಕ್ಷಮ ಪ್ರಾಧಿಕಾರವಾಗಿರುತ್ತದೆ ಎಂದು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಹೆಚ್.ಸಿ ಚಿಕ್ಕಬೋರೇಗೌಡ, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರವರು ಶ್ರೀ ಕೃಪಾಕರ ಬಿನ್ ಶಾಮಣ್ಣ ಎಂಬುವವರಿಗೆ ನಿರಾಕ್ಷೇಪಣಾ ಪತ್ರವನ್ನು ಅನುಮೋದನೆ ಪಡೆದಿರುವುದಾಗಿ ನಡವಳಿಯನ್ನು ಮಾಡಿರುವ ಬಗ್ಗೆ ದಾಖಲೆಗಳನ್ನು ನೀಡಿದ್ದು, ಮೂಲ ನಡವಳಿಯಲ್ಲಿ ಸದರಿ ವಿಷಯವನ್ನು ಚರ್ಚಿಸಿರುವ ಬಗ್ಗೆ ಯಾವುದೇ ವಿಷಯವು ದಾಖಲಾಗಿರುವುದಿಲ್ಲವೆಂಬ ಆರೋಪವು ಸಾಬೀತಾಗಿರುವುದೆಂದು ವಿಚಾರಣಾ ಅಧಿಕಾರಿಗಳು ವಿಚಾರಣಾ ತಮ್ಮ ವರದಿಯನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಮೈಸೂರುರವರಿಗೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಶ್ರೀ ಹೆಚ್.ಸಿ ಚಿಕ್ಕಬೋರೇಗೌಡ, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರವರಿಗೆ ತಿಳುವಳಿಕೆ ಪತ್ರವನ್ನು ನೀಡಲಾಗಿದ್ದು, ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸಿರುವುದಿಲ್ಲ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ಉಪ ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು ರವರು ಶ್ರೀ ಹೆಚ್.ಸಿ ಚಿಕ್ಕಬೋರೇಗೌಡ, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸಿಂಧುವಳ್ಳಿ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ಆರೋಪವು ಸಾಬೀತಾಗಿರುವ ಹಿನ್ನೆಲೆಯಲ್ಲಿ ಸದರಿ ನೌಕರನಿಗೆ ದಂಡನೆ ವಿಧಿಸಲು ಸಹಮತಿ ಸೂಚಿಸಿರುತ್ತಾರೆ.

ಮೇಲಿನ ಕಂಡಿಕೆಗಳಲ್ಲಿ ವಿವರಿಸಿದಂತೆ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಗಿನಂತೆ ದಂಡನೆ ವಿಧಿಸಿ ಆದೇಶಿಸಲು ತೀರ್ಮಾನಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:161:ಗ್ರಾಪಂಕಾ:2017 ಬೆಂಗಳೂರು, ದಿನಾಂಕ:-28-11-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ಹೆಚ್.ಸಿ ಚಿಕ್ಕಬೋರೇಗೌಡ, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸಿಂಧುವಳ್ಳಿ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 1957 ರ ನಿಯಮ 214(1)(ಎ)ರ ಪ್ರಕಾರ ನಿವೃತ್ತಿ ವೇತನದ ಶೇ.10ರಷ್ಟನ್ನು 5ವರ್ಷಗಳ ಅವಧಿಗೆ ತಡೆಹಿಡಿಯುವ ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
(ಮುಬಾರಕ್ ಅಹ್ಮದ್) 29/11
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ.
3. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ.
4. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
5. ಶ್ರೀ ಹೆಚ್.ಸಿ ಚಿಕ್ಕಬೋರೇಗೌಡ, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸಿಂಧುವಳ್ಳಿ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ.
6. ಗಣಕ ಕೋಶ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.